ವಾರ್ಡ್ ಮಟ್ಟದ ಲೋಕೋಪಯೋಗಿ ಕಾಮಗಾರಿ, ನಗರ ಯೋಜನೆ ಹಾಗೂ ಮೂಲ ಸೌಕರ್ಯ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರವನ್ನು ಚಲಾಯಿಸಿ ಆಡಳಿತಗಾರರ ದಿನಾಂಕ: 19 -12 -2023ರ ನಡವಳಿಗಳು

ವಿಷಯ ಸಂಖ್ಯೆ:134/2023-24

ಪ್ರಸ್ತಾವನೆ :

ಟಿಪ್ಪಣಿಯಲ್ಲಿ ವಿವರಿಸಿರುವಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವತಿಯಿಂದ Supplying and Laying of various bituminous mixes for repair of potholes and Road cut Portions from established Hot Mix Plant of minimum 50/80 TPH capacity (In Fully working condition) including manufacturing, supplying and laying including the cost of all materials, machineries, labours, consumables etc complete for a period of 2 years in Byatarayanapura Division. (Call-2) ಗೆ ಸಂಬಂಧಿಸಿದಂತೆ 2023-24ನೇ ಸಾಲಿನಲ್ಲಿ ಪ್ರತಿ ವಾರ್ಡ್‌ಗಳಿಗೆ ರೂ.15.00 ಲಕ್ಷಗಳ ಅನುದಾನದಲ್ಲಿ ರಸ್ತೆಗುಂಡಿ ಮುಚ್ಚುವ ಕಾಮಗಾರಿಗಳನ್ನು ಕೈಗೊಳ್ಳುವಂತೆ ಆದೇಶಿಸಿರುತ್ತಾರೆ.

ತತ್ಸಂಬಂಧ, ಈಗಾಗಲೇ ಮಳೆಗಾಲ ಪ್ರಾರಂಭವಾಗಿರುವುದರಿಂದ ಯಲಹಂಕ ವಲಯದ ಬ್ಯಾಟರಾಯನಪುರ ವಿಭಾಗ ವ್ಯಾಪ್ತಿಗೆ ಒಳಪಡುವ ಹತ್ತು ವಾರ್ಡ್‌ಗಳಲ್ಲಿ ಉಂಟಾಗಬಹುದಾದ ರಸ್ತೆ ಗುಂಡಿಗಳನ್ನು ಮುಚ್ಚಲು Fix My Street Application online ತಂತ್ರಾಂಶವು ಜಾರಿಯಲ್ಲಿ ಇರುವುದರಿಂದ ಸದರಿ Fix My Street ಗೆ ಅನುಸಾರವಾಗಿ Work Module ಬದಲಾಗಿ Service Module ನ ಪ್ರಕಾರ 10 ವಾರ್ಡ್‌ಗಳಲ್ಲಿ Pot hole ಮುಚ್ಚುವ ಕಾಮಗಾರಿಗೆ ಟೆಂಡರ್ ಕರೆಯಲಾಗಿರುತ್ತದೆ.

ಸದರಿ ಕಾಮಗಾರಿಯನ್ನು ಸಾರ್ವಜನಿಕ ಸೇವಾ ಹಿತದೃಷ್ಟಿಯಿಂದ ತುರ್ತಾಗಿ ಕೈಗೊಳ್ಳಬೇಕಾಗಿದ್ದರಿಂದ ಸಕ್ಷಮ ಪ್ರಾಧಿಕಾರದಿಂದ ಆಡಳಿತಾತ್ಮಕ ಮಂಜೂರಾತಿಯನ್ನು ನಿರೀಕ್ಷಿಸಿ ಕಾರ್ಯಪಾಲಕ ಅಭಿಯಂತರರು ಬ್ಯಾಟರಾಯನಪುರ ವಿಭಾಗರವರು ದಿನಾಂಕ:06-11-2023 ರಂದು ಟೆಂಡರ್ ಆಹ್ವಾನಿಸಲಾಗಿತ್ತು.

ತಾಂತ್ರಿಕ ಬಿಡ್‌ನ್ನು ದಿನಾಂಕ: **15-11-2023** ರಂದು ತೆರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿ ಬಿಡ್‌ದಾರರಾದ M/s. M S V CONSTRUCTIONS COMPANY ರವರು ಒಬ್ಬರೇ ಬಿಡ್‌ದಾರರು ಭಾಗವಹಿಸಿದ್ದು, ತಾಂತ್ರಿಕವಾಗಿ ಅರ್ಹರಾಗಿರುವ ಸದರಿ ಬಿಡ್‌ದಾರರ ಆರ್ಥಿಕ ಬಿಡ್ ತೆರೆಯಲು ಮುಖ್ಯ ಅಭಿಯಂತರರು ಯಲಹಂಕ ವಲಯರವರು ಅನುಮೋದಿಸಿರುವಂತೆ ದಿನಾಂಕ:**17-11-2023** ರಂದು ಆರ್ಥಿಕ ಬಿಡ್‌ನ್ನು ತೆರೆಯಲಾಗಿದ್ದು, ವಿವರ ಕೆಳಕಂಡಂತೆ ಇರುತ್ತದೆ.

ಕ್ರ ಸಂ	ಗುತ್ತಿಗೆದಾರರ ಹೆಸರು	ಟೆಂಡರ್‌ಗಿಟ್ಟ ಮೊತ್ತ (ರೂ ಗಳಲ್ಲಿ)/ಚ.ಮೀ	ಗುತ್ತಿಗೆದಾರರು ನಮೂದಿಸಿದ ಮೊತ್ತ (ರೂ ಗಳಲ್ಲಿ)/ಚ.ಮೀ	ಗುತ್ತಿಗೆದಾರರು ನಮೂದಿಸಿದ ಮೊತ್ತಕ್ಕೆ ಹೋಲಿಸಿದಾಗ ಶೇಕಡವಾರು ಪ್ರೀಮಿಯಂ	ಷರಾ
1	M/s. M S V CONSTRUCTIONS COMPANY	1438.61	1400.00	(-)2.68% ರಷ್ಟು ಕಡಿಮೆ	ಎಲ್-1

ಗುತ್ತಿಗೆದಾರರಾದ M/s. M S V CONSTRUCTIONS COMPANY ಸಲ್ಲಿಸಿರುವ ಆರ್ಥಿಕ ಬಿಡ್‌ನ್ನು ಪರಿಶೀಲಿಸಲಾಗಿ, ಸದರಿಯವರು ಟೆಂಡರ್‌ಗಿಟ್ಟ ಮೊತ್ತಕ್ಕೆ ಶೇ.-2.68% ರಷ್ಟು ಕಡಿಮೆ ದರಗಳನ್ನು ನಮೂದಿಸಿರುತ್ತಾರೆ.

ಮುಂದುವರೆದು, ಸದರಿ ರಸ್ತೆ ಗುಂಡಿ ಮುಚ್ಚುವ ಕಾಮಗಾರಿಗೆ ಇದು ಎರಡನೇ ಟೆಂಡರ್ ಕರೆಯಾಗಿರುತ್ತದೆ. ಸದರಿ ಟೆಂಡರ್‌ನಲ್ಲಿ ಒಬ್ಬರೇ ಬಿಡ್‌ದಾರರು ಟೆಂಡರ್‌ನಲ್ಲಿ ಭಾಗವಹಿಸಿದ್ದು, ಸದರಿ ಕಾಮಗಾರಿಯನ್ನು ಸಾರ್ವಜನಿಕರ ಸೇವಾ ಹಿತದೃಷ್ಟಿಯಿಂದ ತುರ್ತಾಗಿ ನಿರ್ವಹಿಸಬೇಕಾಗಿರುತ್ತದೆ.

ಈ ಕೆಳಕಂಡ ಪರತ್ತುಗಳಿಗೆ ಒಳಪಡಿಸಿದೆ.

1. ಪ್ರಸ್ತಾಪಿತ ಕಾಮಗಾರಿಗಳ ಸ್ಥಳ ಪರಿವೀಕ್ಷಣೆ ಮಾಡಿ ಕಾಮಗಾರಿಯ ಅವಶ್ಯಕತೆ ಬಗ್ಗೆ ಹಾಗೂ ಸದರಿ ಕಾಮಗಾರಿಯನ್ನು ಪಾಲಿಕೆಯ ಹಿಂದಿನ ಆಯವ್ಯಯಗಳಲ್ಲಿ/ ಅನುದಾನಗಳಲ್ಲಿ ಕೈಗೊಂಡಿಲ್ಲದೆ ಇರುವ ಮತ್ತು ಪುನಾರಾವರ್ತನೆಯಾಗದೇ ಇರುವುದನ್ನು ಖಚಿತ ಪಡಿಸಿಕೊಳ್ಳುವುದು.
2. ಕಕಾಮಗಾರಿಯನ್ನು ಅನುಷ್ಠಾನಗೊಳಿಸುವ ಪೂರ್ವದಲ್ಲಿ ಆಯುಕ್ತರವರ ಕಛೇರಿ ಆದೇಶ ಸಂಖ್ಯೆ:ಮುಲೆಅ/ಆಯವ್ಯ/2019-20/ಪಿಆರ್/11/2018-19 ದಿನಾಂಕ:12-06-2019 ಮತ್ತು ಆಯುಕ್ತರವರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ:ಬಿಬಿಎಂಪಿ/ಆ/ಪಿ.ಆರ್/5287/2019-20, ದಿನಾಂಕ:05-11-2019 ಮತ್ತು ಬಿಬಿಎಂಪಿ/ಪಿ/ಪಿಆರ್/6166/2019-20, ದಿನಾಂಕ:13-12-2019 ರಲ್ಲಿನ ನಿರ್ದೇಶನಗಳನ್ನು/ಪ್ರಕ್ರಿಯೆಗಳನ್ನು ಅನುಸರಿಸತಕ್ಕದ್ದು,
3. ಕಾಮಗಾರಿಗೂ ಮುನ್ನ ಹಾಗೂ ನಂತರದ ಜಿಪಿಎಸ್‌ಯುಳ್ಳ ಛಾಯಾ ಚಿತ್ರಗಳನ್ನು ಸಲ್ಲಿಸತಕ್ಕದ್ದು,

ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಕಾಮಗಾರಿಯ ಅಂದಾಜು ಮೊತ್ತ ರೂ:150.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ನಿರೀಕ್ಷಿಸಿ ಟೆಂಡರ್ ಆಹ್ವಾನಿಸಲಾಗಿರುವುದರಿಂದ ಘಟನ್ನೋತ್ತರ ಆಡಳಿತಾತ್ಮಕ ಅನುಮೋದನೆ ಹಾಗೂ ಸದರಿ ಕಾಮಗಾರಿಯನ್ನು ಸಾರ್ವಜನಿಕರ ಹಿತದೃಷ್ಟಿಯಿಂದ ತುರ್ತಾಗಿ ಕೈಗೊಳ್ಳಬೇಕಾಗಿರುವುದರಿಂದ ಗುತ್ತಿಗೆದಾರರಾದ M/s. M S V CONSTRUCTIONS COMPANY ರವರು ಚದರ ಮೀಟರ್‌ಗೆ ನಮೂದಿಸಿರುವ ಬಿಡ್ ಮೊತ್ತವಾದ ರೂ:1400/- ಗಳಿಗೆ ಟೆಂಡರ್‌ಗಿಟ್ಟ ಮೊತ್ತಕ್ಕೆ ಶೇ.-2.68% ರಷ್ಟು ಕಡಿಮೆ ಟೆಂಡರ್ ಪ್ರೀಮಿಯಂಗೆ ಅನುಮೋದನೆ ನೀಡಲು ಕೋರುತ್ತಾ, ವಾರ್ಡ್ ಮಟ್ಟದ ಲೋಕೋಪಯೋಗಿ ಕಾಮಗಾರಿ, ನಗರ ಯೋಜನೆ ಹಾಗೂ ಮೂಲ ಸೌಕರ್ಯ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರವನ್ನು ಚಲಾಯಿಸಿ ತೀರ್ಮಾನಕ್ಕಾಗಿ ಆಡಳಿತಗಾರರ ಮುಂದೆ ಮಂಡಿಸಿರುವ ವಲಯ ಆಯುಕ್ತರು (ಯಲಹಂಕ ವಲಯ) ರವರ ದಿನಾಂಕ:12-12-2023ರ ಟಿಪ್ಪಣಿ.

ತೀರ್ಮಾನ: ವಲಯ ಆಯುಕ್ತರು (ಯಲಹಂಕ ವಲಯ) ರವರ ದಿನಾಂಕ: 12-12-2023ರ ಟಿಪ್ಪಣಿಯನ್ನು ಒಪ್ಪಿದೆ.

(ರಾಕೇಶ್ ಸಿಂಗ್)
ಆಡಳಿತಗಾರರು